# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:** 505

**ಸದಸ್ಯರ ಹೆಸರು** : ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು)

**ಉತ್ತರಿಸುವ ದಿನಾಂಕ** : 20.02.2023

**ಉತ್ತರಿಸುವ ಸಚಿವರು** : ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆಗೆ ಗಡಿನಾಡು ಪ್ರದೇಶಾಭಿವೃದ್ಧಿ ಮಂಡಳಿಯಿಂದ ಗಡಿನಾಡು ಪ್ರದೇಶಾಭಿವೃದ್ಧಿಗಾಗಿ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ; ಕಳೆದ ಮೂರು ವರ್ಷಗಳಲ್ಲಿ ಬಿಡುಗಡೆಯಾದ ಅನುದಾನ ಮತ್ತು ಖರ್ಚು ಮಾಡಿದ ಅನುದಾನವೆಷ್ಟು; (ವಿವರವಾದ ಮಾಹಿತಿ ನೀಡುವುದು) | ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ವತಿಯಿಂದ ಕಳೆದ ಮೂರು ವರ್ಷಗಳಲ್ಲಿ ಬೀದರ್ ಜಿಲ್ಲೆಗೆ ಬಿಡುಗಡೆ ಮಾಡಿರುವ ಅನುದಾನದ ವಿವರ ಈ ಕೆಳಕಂಡಂತಿದೆ: (see table below) |
| ಆ) | ಬಿಡುಗಡೆ ಮಾಡಿದ ಆ ಅನುದಾನವು ಯಾವ ಉದ್ದೇಶಕ್ಕಾಗಿ ಹಾಗೂ ಯಾವ ಸಂಸ್ಥೆಗೆ ನೀಡಲಾಗಿದೆ; | ಬಿಡುಗಡೆ ಮಾಡಿರುವ ಅನುದಾನದ ಉದ್ದೇಶ ಹಾಗೂ ಕಾಮಗಾರಿಗಳ ವಿವರವನ್ನು ಅನುಬಂಧದಲ್ಲಿ ಒದಗಿಸಿದೆ.<br>ಸದರಿ ಅನುದಾನವನ್ನು ಜಿಲ್ಲಾಧಿಕಾರಿ, ಬೀದರ್ ಜಿಲ್ಲೆ ಇವರಿಗೆ ಬಿಡುಗಡೆ ಮಾಡಲಾಗಿರುತ್ತದೆ. |
| ಇ) | ಅನುದಾನ ಸಮರ್ಪಕವಾಗಿ ಬಳಕೆಯಾಗಿದೆಯೇ; ಇದರ ಮೇಲುಸ್ತುವಾರಿ ನಿರ್ವಹಿಸುವವರು ಯಾರು; | ಗಡಿ ಅಭಿವೃದ್ಧಿ ಪ್ರಾಧಿಕಾರದಿಂದ ಬಿಡುಗಡೆಯಾಗಿರುವ ಅನುದಾನವು ಸಮರ್ಪಕವಾಗಿ ಬಳಕೆಯಾಗಿರುತ್ತದೆ.<br>ಸದರಿ ಅನುದಾನದ ಮೇಲುಸ್ತುವಾರಿಯನ್ನು ಜಿಲ್ಲಾಧಿಕಾರಿ, ಬೀದರ್ ಜಿಲ್ಲೆ ಇವರು ನಿರ್ವಹಿಸುತ್ತಾರೆ. |

| ವರ್ಷ | ಬಿಡುಗಡೆಯಾದ ಅನುದಾನ ಮೊತ್ತ (ರೂ.ಲಕ್ಷಗಳಲ್ಲಿ) | ಖರ್ಚಾದ ಅನುದಾನದ ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|
| 2019-20 | 253.50 | 223.00 |
| 2020-21 | 20.00 | - |
| 2021-22 | 426.00 | 292.84 |

| | | |
|---|---|---|
| ಈ) | ಬೀದರ್ ಜಿಲ್ಲೆಗೆ ಬಂದ ಅನುದಾನವು ಸರಿಯಾದ ರೀತಿಯಲ್ಲಿ ಬಳಕೆಯಾಗದೇ ದುರ್ಬಳಕೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ತನಿಖೆ ಮಾಡಲು ಸರ್ಕಾರವು ಕ್ರಮ ವಹಿಸುವುದೇ? | ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದಿಂದ ಬೀದರ್ ಜಿಲ್ಲೆಗೆ ಬಿಡುಗಡೆ ಮಾಡಲಾಗಿರುವ ಅನುದಾನದಲ್ಲಿ ಕಳೆದ ಮೂರು ವರ್ಷಗಳಲ್ಲಿ ಅನುದಾನ ದುರ್ಬಳಕೆಯಾಗಿರುವ ಬಗ್ಗೆ ಯಾವುದೇ ಮಾಹಿತಿ ಗಮನಕ್ಕೆ ಬಂದಿರುವುದಿಲ್ಲ. |

ಸಂಖ್ಯೆ:ಕಸಂಪಾ 20 ಕೆಓಎಲ್ ಆಕ 2023

(ವಿ.ಸುನಿಲ್ ಕುಮಾರ್)
ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು